RNU AIR DHARWAD

JANUARY 19, 2026

**AKASHAVANI - DHARWAD**

**PRADESH SAMACHARA (KANNADA) 12.00 P.M.**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ರಾಜ್ಯ ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆ, ‘ಎಲಿವೇಟ್’ ಯೋಜನೆಯ,** 22 ನೇ ಸುತ್ತಿನಲ್ಲಿ, ಒಟ್ಟು 146 ಸ್ಟಾರ್ಟ್ ಅಪ್ ಉದ್ಯಮಗಳಿಗೆ 40 ಕೋಟಿ ರೂಪಾಯಿ ಅನುದಾನದ ಬದ್ಧತೆ ನೀಡಿದೆ ಎಂದು ಎಲೆಕ್ಟ್ರಾನಿಕ್ಸ್, ಐಟಿ–ಬಿಟಿ ಖಾತೆ ಸಚಿವ ಪ್ರಿಯಾಂಕ ಖರ್ಗೆ ತಿಳಿಸಿದ್ದಾರೆ. ಶೇಕಡ 43 ರಷ್ಟು ಉದ್ಯಮಗಳು ಬಿಯಾಂಡ್ ಬೆಂಗಳೂರು ವ್ಯಾಪ್ತಿಗೆ ಬರುತ್ತಿವೆ, ಶೇಕಡ 43 ರಷ್ಟು ನವೋದ್ಯಮಗಳನ್ನು ಮಹಿಳೆಯರೇ ನಡೆಸುತ್ತಿದ್ದಾರೆ ಎಂದು ಸಚಿವರು ತಿಳಿಸಿದ್ದಾರೆ. ತಮ್ಮ ಎಕ್ಸ್ ಖಾತೆ ಮೂಲಕ, ಮಾಹಿತಿ ಹಂಚಿಕೊಂಡಿರುವ, ಸಚಿವ ಪ್ರಿಯಾಂಕ್ ಖರ್ಗೆ, ಎಲಿವೇಟ್ ಯೋಜನೆಯಡಿ, ಈ ತನಕ ಒಟ್ಟು ಸಾವಿರದ 230 ನವೋದ್ಯಮಗಳು ಹಲವು ವಲಯ ಹಾಗೂ ಮಾರುಕಟ್ಟೆಗಳಲ್ಲಿ ಪ್ರಭಾವವನ್ನು ಸೃಷ್ಟಿಸುತ್ತಿವೆ ಎಂದಿದ್ದಾರೆ.

<><><>

**ಬೆಳಗಾವಿ ಜಿಲ್ಲೆ, ಖಾನಾಪುರ ತಾಲೂಕು,** ನಂದಗಡದಲ್ಲಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಅಭಿವೃದ್ಧಿ ಪ್ರಾಧಿಕಾರ, 75 ಕೋಟಿ ರೂಪಾಯಿ ವೆಚ್ಚದಲ್ಲಿ, ನೂತನವಾಗಿ ನಿರ್ಮಿಸಿದ, ಸಂಗೊಳ್ಳಿ ರಾಯಣ್ಣ ವಸ್ತು ಸಂಗ್ರಹಾಲಯ ಹಾಗೂ ವೀರಭೂಮಿಯನ್ನು, ಮುಖ್ಯಮಂತ್ರಿ ಸಿದ್ದರಾಮಯ್ಯ ಇನ್ನು ಕೆಲವೇ ಕ್ಷಣಗಳಲ್ಲಿ ಲೋಕಾರ್ಪಣೆ ಗೊಳಿಸಲಿದ್ದಾರೆ. ಬೈಲಹೊಂಗಲದ, ಅಖಿಲ ಕರ್ನಾಟಕ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಸ್ಮರಣೋತ್ಸವ ಸಮಿತಿ, ಕಳೆದ ಎರಡೂವರೆ ದಶಕಗಳಿಂದ, ಯುವ ಸಮೂಹಕ್ಕೆ ನಂದಗಡ ಹಾಗೂ ಸಂಗೊಳ್ಳಿಯ ವೀರರ ಇತಿಹಾಸದ ಬಗ್ಗೆ ಪರಿಚಯಿಸಿ, ದೇಶಭಕ್ತಿ ಮೂಡಿಸುವ ಕಾರ್ಯವನ್ನು ಮಾಡುತ್ತಿದೆ. ಈ ಬಗ್ಗೆ ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ಸಮಿತಿ ಅಧ್ಯಕ್ಷರಾದ ರಾಜು ಸೊಗಲ. . .

<><><>

**ಇಂದು, ಸಮಾನತೆ, ವಿವೇಕ ಹಾಗೂ** ಮಾನವೀಯತೆಯ ಪ್ರತೀಕವಾಗಿರುವ, ಶ್ರೇಷ್ಠ ವಚನಕಾರ ಯೋಗಿ ವೇಮನ ಅವರ ಜಯಂತಿ. ರಾಜ್ಯದ ವಿವಿಧೆಡೆಗಳಲ್ಲಿ ಯೋಗಿ ವೇಮನ ಅವರ, 614 ನೇ ಜಯಂತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ವಾಣಿಜ್ಯ ಮತ್ತು ಕೈಗಾರಿಕೆಗಳ ಖಾತೆ ಸಚಿವ ಎಂ.ಬಿ ಪಾಟೀಲ್, ತಮ್ಮ ಎಕ್ಸ್ ಖಾತೆ ಮೂಲಕ, ಯೋಗಿ ವೇಮನ ಅವರ ಸಾಮಾಜಿಕ ಕೊಡುಗೆಗಳನ್ನು ಸ್ಮರಿಸಿದ್ದು, ನಾಡಿನ ಜನತೆಗೆ, ವೇಮನ ಜಯಂತಿ ಶುಭಾಶಯಗಳನ್ನು ಕೋರಿದ್ದಾರೆ.

<><><>

**ಬಾಗಲಕೋಟೆ ಜಿಲ್ಲೆ, ಬಾದಾಮಿಯ,** ಇಮ್ಮಡಿ ಪುಲಿಕೇಶಿ ಪ್ರಧಾನ ವೇದಿಕೆಯಲ್ಲಿ, ಇಂದು ಸಂಜೆ 6.30 ಕ್ಕೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಚಾಲುಕ್ಯ ಉತ್ಸವ– 2026 ಕ್ಕೆ ಚಾಲನೆ ನೀಡಲಿದ್ದಾರೆ, ಕನ್ನಡ ಮತ್ತು ಸಂಸ್ಕೃತಿ ಖಾತೆ ಸಚಿವರಾದ ಶಿವರಾಜ್ ಎಸ್. ತಂಗಡಗಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

<><><>

**ಗದಗ ಜಿಲ್ಲೆ ಲಕ್ಕುಂಡಿ** ಗ್ರಾಮದಲ್ಲಿ ನಡೆಯುತ್ತಿರುವ, ಉತ್ಖನನ ಕಾರ್ಯ ಇಂದು ನಾಲ್ಕನೆ ದಿನಕ್ಕೆ ಕಾಲಿಟ್ಟಿದೆ. ಗ್ರಾಮದ ಕೋಟೆ ವೀರಭದ್ರೇಶ್ವರ ದೇವಸ್ಥಾನದ ಬಳಿ ಪ್ರಾರಂಭವಾದ ಉತ್ಖನನ ಕಾರ್ಯದಲ್ಲಿ ಕೊಡಲಿಯನ್ನು ಹೋಲುವ ಉಂಡಾಕಾರದ ಕಲ್ಲಿನ ಆಯುಧ ಪತ್ತೆಯಾಗಿದೆ. ಮೊದಲ ದಿನ ಶಿವಲಿಂಗದ ಪಾಣಿ ಪೀಠ, ಎರಡನೇಯ ದಿನದ ಉತ್ಖನನದಲ್ಲಿ, ಪುರಾತನ ಕಾಲದ ಮಣ್ಣಿನ ಮಡಿಕೆ ಚೂರುಗಳು, ಮೂರನೇಯ ದಿನ ಸಣ್ಣ ಶಿವಲಿಂಗ ಹಾಗೂ ಕೋಟೆ ಗೋಡೆಯ ಕುರುಹುಗಳು ಪತ್ತೆಯಾಗಿವೆ. ಇದು ಚಾಲುಕ್ಯರ ಕಾಲದ ಧಾರ್ಮಿಕ ಹಾಗೂ ಸಾಂಸ್ಕೃತಿಕ ಪರಂಪರೆಗೆ ಸಾಕ್ಷಿ ಒದಗಿಸಿದ್ದು, ಇದರ ಬಗ್ಗೆ ಮತ್ತಷ್ಟು ಅಧ್ಯಯನವಾಗಬೇಕಿದೆ ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

<><><>

**ಉತ್ತರಕನ್ನಡ ಜಿಲ್ಲೆ, ಹೊನ್ನಾವರ** ಹಾಗೂ ಬೆಂಗಳೂರು ರಾಷ್ಟ್ರೀಯ ಹೆದ್ದಾರಿಯ, ಸುಳಿಮುರ್ಕಿ ಹಾಗೂ ಮೊಗೇಹಳ್ಳ ವಲಯದಲ್ಲಿ, ಸತತ ಅಪಘಾತ ಸಂಭವಿಸುತ್ತಿರುವ ಹಿನ್ನೆಲೆ, ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ, ಸ್ಥಳಕ್ಕೆ ತೆರಳಿ, ಹಿರಿಯ ಅಧಿಕಾರಿಗಳೊಂದಿಗೆ, ಪರಿಶೀಲಿಸಿದರು. ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು ಹಾಗೂ ಅರಣ್ಯ ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚಿಸಿದ ಸಂಸದರು, ರಾಷ್ಟ್ರೀಯ ಹೆದ್ದಾರಿ ವಿಸ್ತರಣೆಗೆ, ಸೂಕ್ತ ಕ್ರಮ ಕೈಗೊಳ್ಳುವಂತೆ, ಸೂಚಿಸಿದರು.

<><><>

**ಪ್ರಧಾನಮಂತ್ರಿ ಬೆಳೆ ವಿಮೆ ಯೋಜನೆಯ,** ಸಮರ್ಥ ಹಾಗೂ ಪರಿಣಾಮಕಾರಿ ಅನುಷ್ಠಾನಕ್ಕಾಗಿ, ಕರ್ನಾಟಕ ರಾಜ್ಯ, ದೇಶಕ್ಕೆ, ದ್ವಿತೀಯ ಸ್ಥಾನ ಗಳಿಸಿದೆ. ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವಾಲಯ, ಕರ್ನಾಟಕಕ್ಕೆ ಪ್ರಶಂಸಾ ಪತ್ರ ನೀಡಿದೆ. ರಾಜ್ಯ ಕೃಷಿ ಇಲಾಖೆ ಆಯುಕ್ತರು ಹಾಗೂ ಕೃಷಿ ನಿರ್ದೇಶಕರು, ಬೆಂಗಳೂರಿನಲ್ಲಿ ನಡೆದ, 13ನೇ ರಾಷ್ಟ್ರೀಯ ಸಮ್ಮೇಳನದಲ್ಲಿ, ಕೇಂದ್ರ ಸಹಕಾರ ಸಚಿವಾಲಯದ ಕಾರ್ಯದರ್ಶಿಗಳಿಂದ, ಪ್ರಶಂಸಾ ಪತ್ರ ಸ್ವೀಕರಿಸಿದರು.

<><><>

**ಮಾದಕ ವಸ್ತುಗಳ ಸೇವನೆ, ಸಾಗಣೆ ಸೇರಿದಂತೆ,** ಸೈಬರ್ ಮತ್ತು ಆನ್ಲೈನ್ ಆರ್ಥಿಕ ಅಪರಾಧಗಳ ನಿಯಂತ್ರಣಕ್ಕೆ, ಒತ್ತು ನೀಡುವಂತೆ, ರಾಜ್ಯದ ಹಿರಿಯ ಪೊಲೀಸ್ ಅಧಿಕಾರಿಗಳಿಗೆ, ಗೃಹ ಖಾತೆ ಸಚಿವ ಜಿ. ಪರಮೇಶ್ವರ ಸೂಚಿಸಿದ್ದಾರೆ. ಬೆಂಗಳೂರಿನ, ರಾಜ್ಯ ಪೊಲೀಸ್ ಪ್ರಧಾನ ಕಚೇರಿಯಲ್ಲಿ, ರಾಜ್ಯದ ಕಾನೂನು, ಸುವ್ಯವಸ್ಥೆ ಮತ್ತು ಆಧುನಿಕ ಪೊಲೀಸ್ ವ್ಯವಸ್ಥೆಗೆ ಸಂಬಂಧಿಸಿ, ಮಹತ್ವದ ವಿ ʻಯಗಳ ಕುರಿತು, ಸಚಿವರು ಹಿರಿಯ ಪೊಲೀಸ್ ಅಧಿಕಾರಿಗಳೊಂದಿಗೆ ಸಮಾಲೋಚಿಸಿದರು.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ**

<><><>